# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು-24

ಸಂಖ್ಯೆ: ಸ.ಅ/ವಾ-21/ಪಿ.ಆರ್/19/2021-22 ದಿನಾಂಕ:24-11-2021

## ::ವಾರ್ಡ್ ಸಮಿತಿ ಸಭೆಯ ನಡವಳಿಗಳು::

ವಿಷಯ: ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 23-11-2021 ರಂದು ವಾರ್ಡ್ ನಂ:21 ಹೆಬ್ಬಾಳದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

:: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 01 | ಶ್ರೀ.ಎಂ.ವೆಂಕಟಾಚಲಪತಿ (ಜಂಟಿ ಆಯುಕ್ತರು ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 02 | ಶ್ರೀ. ಆತೀಫ್ ಮೊಹಮ್ಮದ್.ಹೆಚ್.ಬಿ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಹೆಬ್ಬಾಳ ಉಪ ವಿಭಾಗ |
| 03 | ಶ್ರೀ.ಅತೀಕ್ ಮೊಹಮ್ಮದ್ | ಸಹಾಯಕ ಅಭಿಯಂತರರು, ಬೆಸ್ಕಾಮ್. |
| 04 | ಶ್ರೀ.ಮುಕೇಶ್.ಎಸ್.ಬಿರಾದಾರ್ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ನಂ. 21 |
| 05 | ಶ್ರೀಮತಿ ಉಷಾರಾಣಿ | ಹಿರಿಯ ಆರೋಗ್ಯ ಪರಿವೀಕ್ಷಕರು. (ವಾರ್ಡ್ ಸಂಖ್ಯೆ.21) |
| 06 | ಶ್ರೀ.ರಾಮಣ್ಣ | ಕಂದಾಯ ಪರಿವೀಕ್ಷಕರು |
| 07 | ಶ್ರೀಮತಿ. ಡಾ॥ ಭಾರತಿ | ವೈಧ್ಯಾಧಿಕಾರಿಗಳು, ವಾರ್ಡ್ ಸಂಖ್ಯೆ 21 ಹೆಬ್ಬಾಳ |
| 08 | ಶ್ರೀ.ವಿವೇಕ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ 21 ಹೆಬ್ಬಾಳ |
| 09 | ಶ್ರೀ.ಜಿ.ಸ್ವಾಮಿ | ಬಿ.ಡಬ್ಲ್ಯೂ.ಎಸ್.ಎಸ್.ಬಿ (ವಾಟರ್‌ಮ್ಯಾನ್) |
| 10 | ಶ್ರೀ.ಕೆಪ್ಟನ್ ರಾಮಚಂದ್ರ, | ಅಧ್ಯಕ್ಷರು ಸ್ಥಳೀಯ ಕ್ಷೇಮಾಭಿವೃದ್ಧಿ ಸಂಘ (ರಿ) ಆನಂದ ನಗರ |
| 11 | ಶ್ರೀಮತಿ ವಾಣಿ ಗಣಪತಿ | ಸ್ಥಳೀಯ ನಿವಾಸಿ |
| 12 | ಶ್ರೀ. ಪ್ರಕಾಶ್ ಎಂ.ಎನ್ | ಕಾರ್ಯದರ್ಶಿಗಳು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, 1ನೇ ಬ್ಲಾಕ್. |
| 13 | ಶ್ರೀ. ವೀರ ಶೇಖರ್ | ಕಾರ್ಯದರ್ಶಿ, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, |
| 14 | ಶ್ರೀ.ಎನ್.ರಾಮಕೃಷ್ಣ | ಸ್ಥಳೀಯ ನಿವಾಸಿ |
| 15 | ಶ್ರೀ.ಬಿ.ಎನ್.ಬಸವರಾಜ್ | ಸ್ಥಳೀಯ ನಿವಾಸಿ |
| 16 | ಶ್ರೀ.ಸೈಯದ್ ಹುಸೇನ್ ಅಹಮದ್ | ಸ್ಥಳೀಯ ನಿವಾಸಿ |
| 17 | ಶ್ರೀ.ಡಿ.ಬಿ.ಬೀದರಹಳ್ಳಿ | ಸ್ಥಳೀಯ ನಿವಾಸಿ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ, ಶ್ರೀ. ಎಂ. ವೆಂಕಟಾಚಲಪತಿ ಮತ್ತು ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಮುಕೇಶ್. ಎಸ್. ಬಿರಾದಾರ್ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

- ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಈ ಸಭೆಯಲ್ಲಿ ತಿಳಿಸಿರುತ್ತಾರೆ.
- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**
    1. ವಾರ್ಡ್ ವ್ಯಾಪ್ತಿಯಲ್ಲಿನ ಬ್ಲಾಕ್‌ಸ್ಪಾಟ್‌ಗಳನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
    2. ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ವಾರ್ಡಿನಲ್ಲಿ ಪಾದಚಾರಿ ಮಾರ್ಗಗಳಲ್ಲಿ ಶೇಕರಣೆ ಮಾಡಿರುವ ಮರದ ಕೊಂಬೆಗಳನ್ನು ತೆರೆವುಗೊಳಿಸಲು ಸೂಚಿಸಲಾಯಿತು.
    3. ವಾರ್ಡ್ ವ್ಯಾಪ್ತಿಯಲ್ಲಿ ಶೇಖರಣೆಯಾಗುವ ಹಸಿ ಮತ್ತು ಒಣ ಕಸವನ್ನು ಬೇರ್ಪಡಿಸಿ ಸಂಗ್ರಹಣೆ ಮಾಡಿ ಸಾಗಾಣೀಕ ಮಾಡುವಂತೆ ವಾರ್ಡಿನ ಕಿರಿಯ ಆರೋಗ್ಯ ಪರಿವೀಕ್ಷಕರುಗೆ ಸೂಚಿಸಲಾಯಿತು.
    4. ವಾರ್ಡ್ ವ್ಯಾಪ್ತಿಯಲ್ಲಿ ಬರುವ 3ನೇ ಮುಖ್ಯ ರಸ್ತೆ, ಎಂಎಸ್.ಹೆಚ್. ಬಡಾವನೆ ಉಧ್ಯಾನವನವನ್ನು ಪ್ರತಿ ದಿನ ಸ್ವಚ್ಛಗೊಳಿಸಲು ಸೂಚಿಸಲಾಯಿತು.

- **ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಗೆ:**

1. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ರ ಲಸಿಕೆಯನ್ನು ವಾರ್ಡಿನ ಸಾರ್ವಜನಿಕರು ಹಾಗೂ ಅಧಿಕಾರಿ ನೌಕರರುಗಳಿಗೆ ತೆಗೆದುಕೊಳ್ಳಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಯಿತು.

- **ವಿದ್ಯುತ್ ವಿಭಾದದವರಿಗೆ:**

1. ವಾರ್ಡ್ ವ್ಯಾಪ್ತಿಯಲ್ಲಿ ದುರಸ್ಥಿಯಲ್ಲಿರುವ ಬೀದಿ ದೀಪಗಳನ್ನು ಗುರುತಿಸಿ ದುರಸ್ಥಿಯಲ್ಲಿರುವ ಬೀದಿ ದೀಪಗಳನ್ನು ತುರ್ತಾಗಿ ಸರಿಪಡಿಸುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿರುವ ಅಳವಡಿಸಿರುವ ಬೀದಿ ದಿಪಗಳಿಗೆ ಸಕಾಲಕ್ಕೆ ಆನ್ ಮತ್ತು ಆಫ್ ಆಗುವಂತೆ ಟೈಮರ್ ಗಳನ್ನು ಅಳವಡಿಸಲು ಸಂಬಂಧಪಟ್ಟು ಅಧಿಕಾರಿಗಳಿಗೆ ಸೂಚಿಸಲಾಯಿತು.

- **ಕಾಮಗಾರಿ ಇಲಾಖೆಗೆ:**

1. ವಾರ್ಡ್ ವ್ಯಾಪ್ತಿಯಲ್ಲಿ ಇರುವ ಬಾಕಿ ಇರುವ ಕಾಮಗಾರಿಗಳನ್ನು ಪರಿಶೀಲಿಸಿ ಪೂರ್ಣಗೊಳಸುವಂತೆ ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರಸ್ತೆಗಳಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಮುಚ್ಚಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಕೂಡಲೇ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
3. ವಾರ್ಡ್ ವ್ಯಾಪ್ತಿಯಲ್ಲಿ ಬರುವ 4ನೇ ಮುಖ್ಯ ರಸ್ತೆ ಆನಂದನಗರ, 1ನೇ ಬ್ಲಾಕ್ ಆನಂದ ನಗರ, 3ನೇ ಮುಖ್ಯ ರಸ್ತೆ ಎಸ್.ಬಿ.ಎಂ.ಕಾಲೋನಿ ರ ರಸ್ತೆಗಳಲ್ಲಿ ಚರಂಡಿಗಳಲ್ಲಿ ಹೂಲು ತೆಗೆಯುವ ಕಾಮಗಾರಿ ಹಾಗೂ ರಸ್ತೆ ಡಾಂಬರೀಕರಣ ಕಾಮಗಾರಿಗಳನ್ನು ನಿರ್ವಹಿಸಬೇಕಾಗಿ ಅಧಿಕಾರಿಗಳಲ್ಲಿ ಮನವಿ ಮಾಡಲಾಯಿತು.

- **ಕಂದಾಯ ಇಳಾಖೆ:**

1. ಸಂಬಂಧಪಟ್ಟ ವಾರ್ಡ್ ಪ್ರದೇಶಗಳಲ್ಲಿ ಆದಾಯ ತೆರಿಗೆಗಳನ್ನು ವಸೂಲಿ ಮಾಡಲು ಸೂಚಿಸಲಾಯಿತು.

- **ತೋಟಗಾರಿಕೆ ಇಲಾಖೆ:**

1. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ಚಾಚಿಕೊಂಡಿರುವ ಮರದ ಕೊಂಬೆಗಳನ್ನು ತೆರವುಗೊಳಿಸುವಂತೆ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

- **ಬೆಸ್ಕಾಂ ವಿಭಾಗದವರಿಗೆ:**

1. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್‌ನ್ನು ಸಮಯಕ್ಕೆ ಸರಿಯಾಗಿ ಸರಬರಾಜು ಮಾಡುವಂತೆ ಸೂಚಿಸಲಾಯಿತು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ:**

1. ವಾರ್ಡ್ ವ್ಯಾಪ್ತಿಯಲ್ಲಿರುವ ರಾಜಕಾಲುವೆಗಳನ್ನು ಸ್ವಚ್ಛಗೊಳಿಸುವಂತೆ ಸೂಚಿಸಲಾಯಿತು.
2. ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿ ನೀರನ್ನು ಪ್ರತಿದಿನ ಸಮಯಕ್ಕೆ ಸರಿಯಾಗಿ ಸರಬರಾಜು ಮಾಡುವಂತೆ ಸೂಚಿಸಲಾಯಿತು.
3. ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆಗಳನ್ನು ಕತ್ತರಿಸಲು ಸಂಬಂಧಪಟ್ಟ ಇಲಾಖೆಯಿಂದ ಅನುಮತಿ ಪಡೆದು ಕಾಮಗಾರಿ ನಿರ್ವಹಿಸಸುವಂತೆ ಸೂಚಿಅಸಲಾಯಿತು.
4. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಓಳ ಚರಂಡಿಗಳನ್ನು ಕಟ್ಟುನಿಟ್ಟಾಗಿ ನಿರ್ವಹಣೆ ಮಾಡಲು ಸಂಬಂಧಪಟ್ಟ ಅಧಿಕಾರಿಗೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಾರ್ಯದರ್ಶಿಗಳು**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ: 21, ಹೆಬ್ಬಾಳ**

**ಅಧ್ಯಕ್ಷರು**
**ಹಾಗೂ ನೋಡಲ್ ಅಧಿಕಾರಿಗಳು**
**ವಾರ್ಡ್ ನಂ: 21, ಹೆಬ್ಬಾಳ**

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ ಕಂದಾಯ ಅಧಿಕಾರಿ (ಹೆಬ್ಬಾಳ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
5. ಸಹಾಯಕ ಕಾರ್ಯಪಾಲಕ ಅಭಿಯಂತರರು(ಹೆಬ್ಬಾಳ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಬ್ಬಾಳ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
7. ಸಹಾಯಕ ಅಭಿಯಂತರರು(ವಿದ್ಯುತ್/ಹೆಬ್ಬಾಳ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
8. ಕಛೇರಿ ಕಡತಕ್ಕೆ.